Akashvani: Bangalore
National Bulletin In Kannada
06.06.2026: 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

06.06.2026: 7.35AM

**ಮುಖ್ಯಾಂಶಗಳು :**

1. ೨೦೨೫-೨೬ರ ಆರ್ಥಿಕ ವರ್ಷದಲ್ಲಿ ಶೇಕಡ ೭.೭ರಷ್ಟು ಬೆಳವಣಿಗೆಯಿಂದ ದೇಶದ ಆರ್ಥಿಕತೆ ಬೆಳವಣಿಗೆ ಬಲಿಷ್ಠ - ಪ್ರಧಾನಿ ನರೇಂದ್ರ ಮೋದಿ
2. ಭಾರತದ ಮೇಜರ್ ಅಭಿಲಾಷಾ ಬರಾಕ್ ಅವರಿಗೆ ವಿಶ್ವಸಂಸ್ಥೆಯ ಪ್ರತಿಷ್ಠಿತ ಮಿಲಿಟರಿ ಜಂಡರ್ ಅಡ್ವೋಕೇಟ್ ಪ್ರಶಸ್ತಿ ಪ್ರದಾನ
3. ಐದು ವರ್ಷಗಳಲ್ಲಿ ಸಮುದ್ರ ಉತ್ಪನ್ನಗಳ ರಫ್ತನ್ನು ೩೦ ಬಿಲಿಯನ್ ಡಾಲರ್‌ಗೆ ಏರಿಸುವ ಗುರಿ - ಸಚಿವ ಪಿಯೂಷ್ ಗೋಯಲ್
4. ನವ ಚಂಡಿಗಢದ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ಭಾರತ - ಅಫ್ಘಾನಿಸ್ತಾನದ ನಡುವೆ ಟೆಸ್ಟ್ ಪಂದ್ಯ

**********

ಜಾಗತಿಕ ಆರ್ಥಿಕ ಬಿಕ್ಕಟ್ಟಿನ ಹೊರತಾಗಿಯೂ ೨೦೨೫-೨೬ರ ಆರ್ಥಿಕ ವರ್ಷದಲ್ಲಿ ದೇಶವು ಶೇಕಡ ೭.೭ರಷ್ಟು ಬೆಳವಣಿಗೆ ದಾಖಲಿಸಿದ್ದು, ಭಾರತದ ಆರ್ಥಿಕತೆಯ ಅಡಿಪಾಯ ಅಸಾಧಾರಣವಾಗಿ ಬಲಿಷ್ಠವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ. ನಿನ್ನೆ ಸಂಜೆ ದಮನ್‌ನಲ್ಲಿ ಸುಮಾರು ೨ ಸಾವಿರದ ೯೭೦ ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಯೋಜನೆಗಳ ಸರಣಿಯನ್ನು ಉದ್ಘಾಟಿಸಿದ ಬಳಿಕ ಬೃಹತ್ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಭಾರತವು ವಿಶ್ವದಲ್ಲಿಯೇ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಗಳಲ್ಲಿ ಒಂದಾಗಿದೆ. ಬಡವರಿಗೆ ಬೃಹತ್ ಮೂಲಸೌಕರ್ಯ ಅಭಿವೃದ್ಧಿ ಮತ್ತು ಕಲ್ಯಾಣ ಯೋಜನೆಗಳಿಗೆ ಆದ್ಯತೆ ನೀಡುತ್ತಾ ದೇಶವು ತನ್ನ ಸುಧಾರಣಾ ಕ್ರಮಗಳೊಂದಿಗೆ ಮುಂದುವರಿಯುತ್ತದೆ ಎಂದು ಅವರು ನಾಗರಿಕರಿಗೆ ಭರವಸೆ ನೀಡಿದರು.

ಧ್ವನಿ: ಪ್ರಧಾನಿ ಮೋದಿ

ಇಂಧನ ಕ್ಷೇತ್ರದಲ್ಲಿ ದೇಶದ ಸ್ವಾವಲಂಬನೆಯನ್ನು ಒತ್ತಿ ಹೇಳಿದ ಪ್ರಧಾನಿ, ಜಗತ್ತು ಹಸಿರು ಭವಿಷ್ಯದತ್ತ ಸಾಗುತ್ತಿದೆ. ಭಾರತವು ಪರಿಸರ ಸಂರಕ್ಷಣೆಯೊಂದಿಗೆ ಆರ್ಥಿಕ ಬೆಳವಣಿಗೆಯನ್ನು ಸಮತೋಲನಗೊಳಿಸುವ ಮೂಲಕ ಸಕ್ರಿಯವಾಗಿ ಮುನ್ನಡೆಯುತ್ತಿದೆ ಎಂದು ಹೇಳಿದ್ದಾರೆ. ಇದಕ್ಕೂ ಮೊದಲು ಪ್ರಧಾನಿ, ಸೂರತ್‌ನಲ್ಲಿ ೧೮ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಮೂಲಸೌಕರ್ಯ ಯೋಜನೆಗಳಿಗೆ ಚಾಲನೆ ನೀಡಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಭಾರತದ ಒಟ್ಟು ನವೀಕರಿಸಬಹುದಾದ ಇಂಧನ ಸಾಮರ್ಥ್ಯವಾದ ೨೫೦ ಗಿಗಾವ್ಯಾಟ್‌ಗಳಲ್ಲಿ ಗುಜರಾತ್ ಮಾತ್ರ ೫೦ ಗಿಗಾವ್ಯಾಟ್‌ಗಳನ್ನು ಕೊಡುಗೆ ನೀಡುತ್ತದೆ. ಇದು ದೇಶದ ಹಸಿರು ಇಂಧನ ಪಾಲಿನ ನಿರ್ಣಾಯಕ ಐದನೇ ಒಂದು ಭಾಗವನ್ನು ಹೊಂದಿದೆ ಎಂದು ತಿಳಿಸಿದರು. ಸೌರಶಕ್ತಿಯಿಂದ ಹಸಿರು ಹೈಡ್ರೋಜನ್ ಮತ್ತು ಹಸಿರು ಅಮೋನಿಯಾಕ್ಕೆ ಬದಲಾಯಿಸುವಲ್ಲಿ ಗುಜರಾತ್ ಬೃಹತ್ ಪಾತ್ರವನ್ನು ವಹಿಸಲು ಸಜ್ಜಾಗಿದೆ. ಇದು ಇಂಧನ ಸ್ವಾವಲಂಬನೆಯನ್ನು ಸಾಧಿಸಲು ಅವಶ್ಯಕವಾಗಿದೆ ಎಂದು ಹೇಳಿದರು. ಸೂರತ್‌ನ ರೂಪಾಂತರದ ಕುರಿತು ಮಾತನಾಡಿದ ಪ್ರಧಾನಿ, ನಗರದ ಚೈತನ್ಯ ಮತ್ತು ಹಸಿರು ನಗರವಾಗಿ ಅದರ ಪರಿವರ್ತನೆಯನ್ನು ಶ್ಲಾಘಿಸಿದರು. ಕಳೆದ ೧೨ ವರ್ಷಗಳಲ್ಲಿ ಸಾಮೂಹಿಕ ಚಳವಳಿಯಾಗಿ ಮಾರ್ಪಟ್ಟಿರುವ ಸೂರತ್‌ನ ವೃತ್ತಾಕಾರದ ನೀರಿನ ಆರ್ಥಿಕ ಮಾದರಿ ಮತ್ತು 'ತ್ಯಾಜ್ಯದಿಂದ ಸಂಪತ್ತು' ಉಪಕ್ರಮವನ್ನು ಅವರು ಶ್ಲಾಘಿಸಿದರು. ಸೂರತ್ ತಲುಪಿದ ನಂತರ ಪ್ರಧಾನಿ ಮೊದಲು ಹಜೀರಾಗೆ ಭೇಟಿ ನೀಡಿ, ಅಲ್ಲಿ ನಡೆಯುತ್ತಿರುವ ಕೈಗಾರಿಕಾ ಮತ್ತು ಮೂಲಸೌಕರ್ಯ ಕಾರ್ಯಾಚರಣೆಗಳನ್ನು ಪರಿಶೀಲಿಸಿದರು.

**********

ಭಾರತದ ಮೊದಲ ಮಹಿಳಾ ಯುದ್ಧ ಹೆಲಿಕಾಪ್ಟರ್ ಪೈಲಟ್ ಮೇಜರ್ ಅಭಿಲಾಷಾ ಬರಾಕ್ ನಿನ್ನೆ ವಿಶ್ವಸಂಸ್ಥೆಯ ೨೦೨೫ರ ವರ್ಷದ ಮಿಲಿಟರಿ ಜಂಡರ್ ಅಡ್ವೊಕೇಟ್ ಪ್ರಶಸ್ತಿಯನ್ನು ಸ್ವೀಕರಿಸಿದರು. ಶಾಂತಿಪಾಲನೆಯಲ್ಲಿ ಮಹಿಳೆಯರ ಪಾತ್ರ ಮತ್ತು ದೃಷ್ಟಿಕೋನಗಳನ್ನು ಉತ್ತೇಜಿಸಲು ಮೇಜರ್ ಅಭಿಲಾಷಾ ಬರಾಕ್ ಅವರ ಪ್ರಯತ್ನಗಳನ್ನು ಗುರುತಿಸಿ ಈ ಪ್ರಶಸ್ತಿಯನ್ನು ನೀಡಲಾಗಿದೆ. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರು ೨೦೨೫ ರ ವಿಶ್ವಸಂಸ್ಥೆಯ ಪ್ರತಿಷ್ಠಿತ ಮಿಲಿಟರಿ ಜಂಡರ್ ಅಡ್ವೋಕೇಟ್ ಪ್ರಶಸ್ತಿಯನ್ನು ಮೇಜರ್ ಅಭಿಲಾಷಾ ಬರಾಕ್ ಅವರಿಗೆ ಪ್ರದಾನ ಮಾಡಿದ್ದಾರೆ. ಲೆಬನಾನ್‌ನಲ್ಲಿ ವಿಶ್ವಸಂಸ್ಥೆಯ ಮಧ್ಯಂತರ ಪಡೆಯಲ್ಲಿ ಭಾರತೀಯ ಬೆಟಾಲಿಯನ್‌ನೊಂದಿಗೆ ಸೇವೆ ಸಲ್ಲಿಸುತ್ತಿರುವ ಮೇಜರ್ ಬರಾಕ್ ಅವರನ್ನು

ವಿಶ್ವಸಂಸ್ಥೆಯ ಶಾಂತಿಪಾಲಕರ ಅಂತಾರಾಷ್ಟ್ರೀಯ ದಿನವನ್ನು ಗುರುತಿಸುವ ಸಮಾರಂಭದಲ್ಲಿ ಗೌರವಿಸಲಾಯಿತು. ಮೇಜರ್ ಬರಾಕ್ ಓರ್ವ ಅದ್ಭುತ ಮಾದರಿ ಎಂದು ಬಣ್ಣಿಸಿದ ಆಂಟೋನಿಯೊ ಗುಟೆರೆಸ್, ಮಹಿಳಾ ತಂಡ ಮತ್ತು ಲಿಂಗ ಕೇಂದ್ರದ ಕಮಾಂಡರ್ ಆಗಿ ಮೇಜರ್ ಬರಾಕ್ ಅವರ ಕಾರ್ಯವನ್ನು ಶ್ಲಾಘಿಸಿದರು. ಮಹಿಳೆಯರು ಮತ್ತು ಇತರ ದುರ್ಬಲ ವರ್ಗಗಳ ಅಗತ್ಯತೆಗಳು ಶಾಂತಿಪಾಲನಾ ಕಾರ್ಯಾಚರಣೆಗಳಲ್ಲಿ ಮೇಜರ್ ಬರಾಕ್ ಅವರ ಕಾರ್ಯವು ಅತ್ಯಂತ ಮಹತ್ವದ್ದಾಗಿದೆ ಎಂದರು. ಮೇಜರ್ ಬರಾಕ್ ಭಾರತೀಯ ಸೇನೆಯಲ್ಲಿ ಮೊದಲ ಮಹಿಳಾ ಯುದ್ಧ ಹೆಲಿಕಾಪ್ಟರ್ ಪೈಲಟ್ ಕೂಡ ಆಗಿದ್ದಾರೆ. ೨೦೧೯ ರಲ್ಲಿ ಮೇಜರ್ ಸುಮನ್ ಗವಾನಿ ಮತ್ತು ೨೦೨೩ ರಲ್ಲಿ ಮೇಜರ್ ರಾಧಿಕಾ ಸೇನ್ ನಂತರ ಅವರು ಈ ಪ್ರಶಸ್ತಿಯನ್ನು ಪಡೆದ ಮೂರನೇ ಭಾರತೀಯರಾಗಿದ್ದಾರೆ.

**********

ಮುಂದಿನ ಐದು ವರ್ಷಗಳಲ್ಲಿ ಭಾರತ ತನ್ನ ಸಮುದ್ರ ಉತ್ಪನ್ನಗಳ ರಫ್ತನ್ನು ಪ್ರಸ್ತುತ ಇರುವ ೮ ಬಿಲಿಯನ್ ಅಮೆರಿಕನ್ ಡಾಲರ್‌ಗಳಿಂದ ೩೦ ಬಿಲಿಯನ್ ಅಮೆರಿಕನ್ ಡಾಲರ್‌ಗಳಿಗೆ ಹೆಚ್ಚಿಸುವ ಗುರಿ ಇರಿಸಿಕೊಳ್ಳಬೇಕೆಂದು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದರು. ಮೀನುಗಾರಿಕೆ ವಲಯಕ್ಕೆ ಜಾಗತಿಕ ಮಾರುಕಟ್ಟೆ ಪ್ರವೇಶವನ್ನು ವಿಸ್ತರಿಸಲು ಸರ್ಕಾರ ಬದ್ಧವಾಗಿದೆ ಎಂದು ಅವರು ಹೇಳಿದರು. ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಪ್ರಾರಂಭವಾದ ಎರಡು ದಿನಗಳ ಸಮುದ್ರ ಆಹಾರ ರಫ್ತಿನ ರಾಷ್ಟ್ರೀಯ ಕಾರ್ಯಾಗಾರದ ಸಂದರ್ಭದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಕಳೆದ ಮೂರುವರೆ ವರ್ಷಗಳಲ್ಲಿ ಭಾರತವು ದಾಖಲೆಯ ಒಂಬತ್ತು ಮುಕ್ತ ವ್ಯಾಪಾರ ಒಪ್ಪಂದಗಳನ್ನು ಪೂರ್ಣಗೊಳಿಸಿದೆ. ಈ ಒಪ್ಪಂದಗಳು ೩೮ ದೇಶಗಳಲ್ಲಿ ಮಾರುಕಟ್ಟೆ ಅವಕಾಶಗಳನ್ನು ತೆರೆದಿವೆ, ಇದರಿಂದಾಗಿ ಭಾರತೀಯ ಮೀನುಗಾರಿಕೆ ಉತ್ಪನ್ನಗಳು ವಿಶ್ವಾದ್ಯಂತ ಗ್ರಾಹಕರನ್ನು ತಲುಪಲು ಅನುವು ಮಾಡಿಕೊಡುತ್ತದೆ ಎಂದು ಹೇಳಿದರು. ನಿನ್ನೆ ಪ್ರಾರಂಭವಾದ ಎರಡು ದಿನಗಳ ಕಾರ್ಯಾಗಾರವು ಭಾರತದ ಮೀನುಗಾರಿಕೆ ಮತ್ತು ಜಲಚರ ಸಾಕಣೆ ವಲಯವನ್ನು ಬಲಪಡಿಸುವುದು ಮತ್ತು ಸಮುದ್ರ ಆಹಾರ ರಫ್ತನ್ನು ಹೆಚ್ಚಿಸುವತ್ತ ಗಮನಹರಿಸುತ್ತದೆ. ಜಾಗತಿಕ ಮೀನು ಉತ್ಪಾದನೆಯಲ್ಲಿ ಭಾರತದ ಕೊಡುಗೆ ಶೇಕಡಾ ೮.೮ ರಷ್ಟಿದ್ದು, ಪ್ರಸ್ತುತ ಒಟ್ಟು ಉತ್ಪಾದನೆ ೧೯.೭ ಮಿಲಿಯನ್ ಟನ್‌ಗಳಷ್ಟಿದೆ ಎಂದು ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಹೇಳಿದರು. ಆಂಧ್ರಪ್ರದೇಶವು ದೇಶದಲ್ಲಿಯೇ ಅತಿ

ಹೆಚ್ಚು ಮೀನು ಉತ್ಪಾದಿಸುವ ರಾಜ್ಯವಾಗಿದ್ದು, ಸುಮಾರು ೫ ಮಿಲಿಯನ್ ಟನ್ ಅಥವಾ ಭಾರತದ ಮೀನು ಮತ್ತು ಸೀಗಡಿ ಉತ್ಪಾದನೆಯಲ್ಲಿ ಸುಮಾರು ೪೦ ಪ್ರತಿಶತದಷ್ಟು ಕೊಡುಗೆ ನೀಡುತ್ತದೆ ಎಂದು ಅವರು ಹೇಳಿದರು.

**********

ನೇಪಾಳದ ವಿದೇಶಾಂಗ ವ್ಯವಹಾರ ಖಾತೆ ಸಚಿವ ಶಿಸಿರ್ ಖನಾಲ್  ಮೂರು ದಿನಗಳ ಭಾರತ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದರು. ಭಾರತದ ವಿದೇಶಾಂಗ ಖಾತೆ ಸಚಿವ ಡಾ.ಎಸ್.ಜೈಶಂಕರ್ ಅವರ ಆಹ್ವಾನದ ಮೇರೆಗೆ ಶಿಶಿರ್ ಖನಾಲ್  ಆಗಮಿಸಿದ್ದು, ಇಂದು ಉಭಯ ನಾಯಕರು ಸಮಾಲೋಚನೆ ನಡೆಸಲಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ವಕ್ತಾರ ರಣದೀರ್ ಜೈಸ್ವಾಲ್ ತಿಳಿಸಿದ್ದಾರೆ. ವ್ಯಾಪಾರ, ವಾಣಿಜ್ಯ, ಬಂಡವಾಳ ಹೂಡಿಕೆ ಮತ್ತು ಅಭಿವೃದ್ಧಿ ಸಹಕಾರ ಕುರಿತಂತೆ ನಾಯಕರು ಮಾತುಕತೆ ನಡೆಸಲಿದ್ದಾರೆ.

**********

ನೈಋತ್ಯ ಮುಂಗಾರು ಕೇರಳಂನಲ್ಲಿ ತೀವ್ರಗೊಳ್ಳುತ್ತಿದ್ದಂತೆ, ಇದೇ ೯ ರವರೆಗೆ ರಾಜ್ಯದ ಉತ್ತರ ಜಿಲ್ಲೆಗಳಲ್ಲಿ ಅತಿ ಹೆಚ್ಚು ಮಳೆಯಾಗುವ ಮುನ್ಸೂಚನೆಯನ್ನು ಭಾರತೀಯ ಹವಾಮಾನ ಇಲಾಖೆ ನೀಡಿದೆ. ಇಂದು ಮಲಪ್ಪುರಂ, ಕೋಝಿಕ್ಕೋಡ್, ವಯನಾಡ್, ಕಣ್ಣೂರು ಮತ್ತು ಕಾಸರಗೋಡು ಜಿಲ್ಲೆಗಳಿಗೆ ರೆಡ್ ಅಲರ್ಟ್ ನೀಡಲಾಗಿದ್ದು, ನಾಳೆಯೂ ಮಲಪ್ಪುರಂ, ಕೋಝಿಕ್ಕೋಡ್ ಮತ್ತು ವಯನಾಡ್ ರೆಡ್ ಅಲರ್ಟ್ ನೀಡಿದೆ. ಹವಾಮಾನ ವೈಪರೀತ್ಯದ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು, ಜಿಲ್ಲಾಧಿಕಾರಿಗಳು ನಾಲ್ಕು ಜಿಲ್ಲೆಗಳ ಶಿಕ್ಷಣ ಸಂಸ್ಥೆಗಳಿಗೆ ರಜೆ ಘೋಷಿಸಿದ್ದಾರೆ. ಪ್ರತಿಕೂಲ ಹವಾಮಾನ ಪರಿಸ್ಥಿತಿಗಳು ಮತ್ತು ಸಮುದ್ರಗಳು ಪ್ರಕ್ಷುಬ್ಧವಾಗಿರುವುದರಿಂದ, ಮೀನುಗಾರರು ಮಂಗಳವಾರದವರೆಗೆ ಕೇರಳ-ಲಕ್ಷದ್ವೀಪ ಮತ್ತು ಕರ್ನಾಟಕ ಕರಾವಳಿಯಲ್ಲಿ ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ.

**********

ನವ ಚಂಡಿಗಢದ ಮುಲ್ಲನಪುರದಲ್ಲಿರುವ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ಭಾರತ ಮತ್ತು ಅಫ್ಘಾನಿಸ್ತಾನದ ನಡುವೆ ಟೆಸ್ಟ್ ಪಂದ್ಯ ನಡೆಯಲಿದೆ. ಭಾರತ ೨೦೧೮ರಲ್ಲಿ ಮೊದಲ ಬಾರಿಗೆ ಅಫ್ಘಾನಿಸ್ತಾನ ವಿರುದ್ಧ ಮೊದಲ ಟೆಸ್ಟ್ ಪಂದ್ಯ ಆಡಿತ್ತು. ಉಭಯ ತಂಡಗಳ ನಡುವೆ ೮ ವರ್ಷಗಳ ನಂತರ ನಡೆಯುತ್ತಿರುವ ಮೊದಲ

ಟೆಸ್ಟ್ ಪಂದ್ಯ ಇದಾಗಿದೆ. ಭಾರತ ತಂಡವನ್ನು ನಾಯಕ ಶುಭ್‌ಮನ್ ಗಿಲ್ ಮುನ್ನಡೆಸಲಿದ್ದಾರೆ. ಈ ಪಂದ್ಯ ಭಾರತೀಯ ಕಾಲಮಾನ ಬೆಳಗ್ಗೆ ೯.೩೦ಕ್ಕೆ ಆರಂಭವಾಗಲಿದೆ

**********

೨೦೨೬ರ ಪದ್ಮ ಪ್ರಶಸ್ತಿಗಳಿಗೆ ನಾಮನಿರ್ದೇಶನಗಳನ್ನು ಮುಂದಿನ ತಿಂಗಳ ೩೧ರ ವರೆಗೆ ಸಲ್ಲಿಸಬಹುದಾಗಿದೆ. ಮಾರ್ಚ್ ೧೫ ರಂದು ಪ್ರಾರಂಭವಾದ ಪದ್ಮ ಪ್ರಶಸ್ತಿಗಳಿಗೆ ನಾಮನಿರ್ದೇಶನಗಳು ಮತ್ತು ಶಿಫಾರಸುಗಳನ್ನು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್‌ನಲ್ಲಿ ಆನ್‌ಲೈನ್‌ನಲ್ಲಿ ಮಾತ್ರ ಸ್ವೀಕರಿಸಲಾಗುವುದು ಎಂದು ಗೃಹ ಸಚಿವಾಲಯ ತಿಳಿಸಿದೆ.

*****END*****